ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹಾನಗಲ್.

ಸಿಸಿ ನಂ.1190/2024

ಫಿರ್ಯಾದುದಾರರು : ಸರಕಾರ (ಹಾನಗಲ್ ಪೋಲಿಸರಿಂದ)

ವಿರುದ್ಧ

ಆರೋಪಿ : ರಾಜಪ್ಪ ಓಣಿಕೇರಿ

ಶ್ರೀಮತಿ ರಾಜೇಶ್ವರಿ ಜೆ ಪುರಾಣಿಕ, ಬಿ.ಎ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹಾನಗಲ್ ಆದ ನಾನು ಈ ಕೆಳಗೆ ಕಾಣಿಸಿರುವ:

ರಾಜಪ್ಪ ತಂದೆ ಹನುಮಂತಪ್ಪ ಓಣಿಕೇರಿ,
43 ವರ್ಷ, ವಾಸಃ ನಿಟಗಿನಕೊಪ್ಪ, ಹಾನಗಲ್,
ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ.

ದೋಷಾರೋಪಣೆ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 10.04.2024 ರಂದು ರಾತ್ರಿ 8.30 ಸುಮಾರಿಗೆ ಹಾನಗಲ್ ಪೋಲೀಸ್ ಠಾಣಾ ವ್ಯಾಪ್ತಿಯ ನಿಟಗಿನಕೊಪ್ಪದಲ್ಲಿ ಆರೋಪಿಯಾದ ನೀವು ಸರ್ಕಾರದಿಂದ ಯಾವುದೇ ಪಾಸ್ ವ ಪರ್ಮಿಟ್ ಪಡೆಯದೇ ಅಕ್ರಮವಾಗಿ ಮದ್ಯದ ಪೌಚುಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಮನೆಯಲ್ಲಿ ಸಂಗ್ರಹಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ಹೇಳಿದ ಮದ್ಯದ ಪೌಚುಗಳನ್ನು ಸರ್ಕಾರದಿಂದ ಯಾವುದೇ ಪಾಸ್ ವ ಪರ್ಮಿಟ್ ಪಡೆಯದೇ ಅಕ್ರಮವಾಗಿ ಸ್ವಾಧೀನ ಹೊಂದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-
(ರಾಜೇಶ್ವರಿ ಜೆ ಪುರಾಣಿಕ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಹಾನಗಲ್.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ
ನ್ಯಾಯಾಲಯ ಹಾನಗಲ್.

ಸಿಸಿ ನಂ. 1190/2024

ಆರೋಪಿ ನಂ.1

| | | |
|---|---|---|
| ಆಪಾದಿತನ ಹೆಸರು | : | ರಾಜಪ್ಪ ಓಣಿಕೇರಿ, |
| ತಂದೆಯ ಹೆಸರು | : | ಹನುಮಂತಪ್ಪ |
| ವಯಸ್ಸು | : | 43 |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ನಿಟಗಿನಕೊಪ್ಪ, ಹಾನಗಲ್, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ |

ದಂಡ ಪ್ರಕ್ರಿಯಾ ಸಂಹಿತೆಯ ಕಲಂ **240** ರ ಅಡಿ ಆರೋಪಿಯ ಹೇಳಿಕೆ

ಪ್ರಶ್ನೆ 1 : ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉತ್ತರಃ

ಪ್ರಶ್ನೆ 2 : ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉತ್ತರಃ

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 24.01.2025 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

Sd/-
(ರಾಜೇಶ್ವರಿ ಜೆ ಪುರಾಣಿಕ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,
ಹಾನಗಲ್.